# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ತಾಲ್ಲೂಕಿನ ಮುದ್ದೇನಹಳ್ಳಿ, ಸತ್ಯಸಾಯಿ ಗ್ರಾಮ ಮತ್ತು ಮಾರ್ಗಮಧ್ಯದ 4 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ದಿನಾಂಕ:01.02.2017ರ SLSSC ಸಭೆಯ ನಡವಳಿಗಳು.
2. ಮುಖ್ಯ ಇಂಜಿನಿಯರ್, RDWSD, ರವರ ಕಡತ ಸಂ:ಗ್ರಾಅಪ 1239 ಗ್ರಾಕುನೀ&ನೈಇ 2016-17.

--

**ಪೀಠಿಕೆ:**

ಜಕ್ಕಲಮಡಗು ಜಲಾಶಯದಿಂದ ಚಿಕ್ಕಬಳ್ಳಾಪುರ ನಗರ ಮತ್ತು ಮಾರ್ಗಮಧ್ಯದ ಗ್ರಾಮಗಳಿಗೆ 3ನೇ ಹಂತದ ನೀರು ಸರಬರಾಜು ಯೋಜನೆಯ ಮುಖ್ಯ ಕೊಳವೆ ಮಾರ್ಗದಿಂದ ಮುದ್ದೇನಹಳ್ಳಿ, ಸತ್ಯಸಾಯಿ ಗ್ರಾಮ ಮತ್ತು ಮಾರ್ಗಮಧ್ಯದ 4 ಗ್ರಾಮಗಳಾದ ಕಣಿಜೇನಹಳ್ಳಿ, ಮೈಲಪ್ಪನಹಳ್ಳಿ, ದಿನ್ನೂರು ಮತ್ತು ಕಳಾವಾರ ಗ್ರಾಮಗಳಿಗೆ ನೀರು ಪೂರೈಸುವ ಯೋಜನೆಯ ಅಂದಾಜು ಮೊತ್ತ ರೂ.200.00ಲಕ್ಷಗಳಿಗೆ ದಿನಾಂಕ:01.02.2017ರಂದು ನಡೆದ SLSSC ಸಭೆಯಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿದೆ. ಮೇಲೆ (2)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ CE,RDWSD ರವರು ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ. ನಿಯಮಾನುಸಾರ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತಿ ಹಾಗೂ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರು ಮುಂದಿನ ಪ್ರಕ್ರಿಯೆ ಅನುಸರಿಸಲನುವಾಗುವಂತೆ NRDWP (Coverage & WQ) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 51 ಗ್ರಾನೀಸ(5)2017 ಬೆಂಗಳೂರು, ದಿನಾಂಕ:01.06.2017.**

ಪೀಠಿಕೆಯಲ್ಲಿನ ಪ್ರಸ್ತಾವನೆಯ ಹಿನ್ನೆಲೆಯಲ್ಲಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ ತಾಲ್ಲೂಕಿನ ಮುದ್ದೇನಹಳ್ಳಿ, ಸತ್ಯಸಾಯಿ ಗ್ರಾಮ ಮತ್ತು ಮಾರ್ಗಮಧ್ಯದ 4 ಗ್ರಾಮಗಳಿಗೆ ಜಕ್ಕಲಮಡಗು ಜಲಾಶಯದಿಂದ ಕುಡಿಯುವ ನೀರು ಪೂರೈಸುವ ಯೋಜನೆ ಅಂದಾಜು ಮೊತ್ತ **ರೂ.200.00ಲಕ್ಷ (ಎರಡು ನೂರು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ** ಕೇಂದ್ರ ಪುರಸ್ಕೃತ NRDWPಯಡಿ (ಈ ಆದೇಶಕ್ಕೆ ಲಗತ್ತಿಸಿದ ಅಂದಾಜು ಘೋಷ್ವಾರೆನ್ವಯ) ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. **ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

(ಅ) ಅನುಮೋದಿತ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಗುತ್ತಿಗೆದಾರರು ಕಾಮಗಾರಿಗಳನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಗಳ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2017-18ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಈ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ ಸರ್ಕಾರದಿಂದ ಅನುಮೋದನೆಯಾಗಿರುವ ಸಂಸ್ಥೆ ಮೂಲಕ 3rd Party Inspectionಗೆ ಒಳಪಡಿಸುವುದು.

(ಉ) ಈ ಯೋಜನೆಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 6 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಊ) Bulk Water meter ಹಾಗೂ House hold metering ವ್ಯವಸ್ಥೆಯನ್ನು MVS ಯೋಜನೆಗಳಿರುವೆಡೆ ಕಡ್ಡಾಯವಾಗಿ ಮಾಡಬೇಕು. ಆಯಾ ಗ್ರಾಮ ಪಂಚಾಯತಿ ಸದರಿ ಆಧಾರದ ಮೇಲೆ ಹೊರಗುತ್ತಿಗೆ ಸಂಸ್ಥೆಗೆ/ಸರ್ಕಾರಕ್ಕೆ ನೀರು ಬಳಕೆ ಆಧಾರದ ಮೇಲೆ ನೀರಿನ ಕರ ಪಾವತಿಸಬೇಕು.

(ಋ) ಯೋಜನೆಗಳು ಅನುಷ್ಠಾನಗೊಂಡ ನಂತರ ಅವುಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸ್ಥಳೀಯ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ (VWSSC) / ಸಂಬಂಧಿಸಿದ ಗ್ರಾಮ ಪಂಚಾಯತ್ / ಪಾರದರ್ಶಕ ನೀತಿಯನ್ವಯ ಆಯ್ಕೆ ಮಾಡಿದ ಸರ್ಕಾರೇತರ ಸಂಸ್ಥೆ / ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

(ಎ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

3. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ IFA ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 145 ಎಎಫ್ಎನ್ 2017, ದಿನಾಂಕ:01.04.2017ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ ಬೆಂಗಳೂರು
7. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
8. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂಗಳೂರು-09.

10. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಚಿಕ್ಕಬಳ್ಳಾಪುರ.**
11. ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, **ಚಿಕ್ಕಬಳ್ಳಾಪುರ.**
12. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯತ್, **ಚಿಕ್ಕಬಳ್ಳಾಪುರ**
13. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, **ಬೆಂಗಳೂರು.**
14. ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಚಿಕ್ಕಬಳ್ಳಾಪುರ**
15. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
16. ಮುಖ್ಯ ಲೆಕ್ಕಾಧಿಕಾರಿಗಳು, RDWSD, ಕಾವೇರಿಭವನ, ಬೆಂಗಳೂರು-09.
17. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
18. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
19. ಆಯುಕ್ತರು, RDWSD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು ಇವರುಗಳ ಆಪ್ತ ಸಹಾಯಕರು.
20. ಉಪ ನಿರ್ದೇಶಕರು, Network Management Center (TNMC), ನಂ.49, ಖನಿಜ ಭವನ, ರೇಸ್ ಕೋರ್ಸ ರಸ್ತೆ, ಬೆಂಗಳೂರು.
21. ಜಿಲ್ಲಾ ಖಜಾನಾಧಿಕಾರಿಗಳು, ಮಂಡ್ಯ.
22. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಬ್ರ್ಯಾಂಚ್, ರಾಜದ್ದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.

ಸಂ: ಗ್ರಾಅಪ 51 ಗ್ರಾನೀಸ(5)17, ದಿನಾಂಕ: 01.06.2017ರ ಆದೇಶದ ಅನುಬಂಧ

| Providing water supply to Muddenahalli village, Sathya Sai Seva Trust and 4 enroute villages in Chikkaballapur. | | |
|---|---|---|
| **District** | **Chickaballapur** | |
| | | |
| **No.** | **Particulars** | **Amount (Rs.)** |
| | **A) CIVIL WORKS** | |
| 1 | Pure water gravity main proposed for water supply scheme to Muddenahalli village , Satya Sai Grama and 4 nos, of enroute villages. | 14840600.00 |
| 2 | Construction of Sump 100KL at Muddenahalli | 869300.00 |
| 3 | Pump House with Pumping Machinery near sump at Muddenahalli | 233000.00 |
| 4 | Construction of Over Head Tank of 50 KL Capacity with 6 m Staging for Dinnur | 1250000.00 |
| 5 | Road crossings | 390200.00 |
| 6 | Construction of Pedastral | 131000.00 |
| 7 | Bescom Deposit | 50000.00 |
| 1 | DPR preparation Contingencies & Escalation charges | 2235900.00 |
| | **GRAND TOTAL** | **20000000.00** |
| | | **200.00 lakhs** |

**Chief Engineer**
**Rural Drinking Water and Sanitation Department**
**Bangalore**

"ಅನುಮೋದಿಸಲ್ಪಟ್ಟಿದೆ"

ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ